**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2333(2729) |
| 2) | ಮಾನ್ಯ ಸದಸ್ಯರ ಹೆಸರು | ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 28-03-2022 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ಪದವಿ ಮುಗಿಸಿಕೊಂಡು ಹಳ್ಳಿ/ಗ್ರಾಮ ತೊರೆದು ಪಟ್ಟಣಕ್ಕೆ ಬಂದು ಮನೆ ಬಾಡಿಗೆ, ವಿದ್ಯುತ್ ಬಿಲ್ಲು, ಸಾರಿಗೆ ವೆಚ್ಚ, ರೇಷನ್ ಹೀಗೆ ಅಲ್ಪ ಸಂಬಳದಲ್ಲಿ ಕಡುಕಷ್ಟದ ಜೀವನ ನಡೆಸುತ್ತಿರುವ ಪದವೀಧರರ ಸಮಸ್ಯೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹವರ ಬದುಕು ಸುಗಮಗೊಳಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; | ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ನಿರುದ್ಯೋಗಿ ಪದವೀಧರರಿಗೆ ಉದ್ಯೋಗ ಕಲ್ಪಿಸಲು ಈ ಕೆಳಕಂಡ ಯೋಜನೆಗಳನ್ನು ರೂಪಿಸಲಾಗಿದೆ.<br><br>**<u>ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ</u>**<br><br>**<u>ವೃತ್ತಿ ಮಾರ್ಗದರ್ಶನ</u>**:-ಕಛೇರಿಗೆ ಭೇಟಿ ನೀಡುವ ಉದ್ಯೋಗಾಕಾಂಕ್ಷಿಗಳಿಗೆ ಹಾಗೂ ಶಾಲಾ ಕಾಲೇಜುಗಳಲ್ಲಿ ವೃತ್ತಿ ಮಾರ್ಗದರ್ಶನ, ಸಮಾಲೋಚನೆ, ಅಲ್ಪಾವಧಿ ಕೌಶಲ್ಯ ತರಬೇತಿ ನೀಡಿ ಉದ್ಯೋಗ ಅವಕಾಶಗಳ ಪಡೆಯುವಿಕೆಯನ್ನು ಹೆಚ್ಚಿಸಲಾಗುತ್ತಿದೆ.<br><br>**<u>ಸ್ಟಡಿ ಸರ್ಕಲ್</u>**:- ಸರ್ಕಾರಿ ವಲಯದ ಎಲ್ಲಾ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕವೇ ನೇಮಕಾತಿಯಾಗುತ್ತಿರುವ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಉದ್ಯೋಗ ವಿನಿಮಯ ಕಛೇರಿಗಳಲ್ಲಿ ಸ್ಟಡಿ ಸರ್ಕಲ್ ಮೂಲಕ ಉಚಿತ ಪರೀಕ್ಷಾಪೂರ್ವ ತರಬೇತಿ ಕಾಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>**<u>ಮಾದರಿ ವೃತ್ತಿ ಕೇಂದ್ರ</u>**:- ಕೇಂದ್ರ ಸರ್ಕಾರದ ಶೇಕಡ 100ರ ಅನುದಾನದೊಂದಿಗೆ ಆಯ್ದ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗಳಲ್ಲಿ **ಮಾದರಿ ವೃತ್ತಿ ಕೇಂದ್ರ**ಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಉದ್ಯೋಗ ವಿನಿಮಯ ಕಛೇರಿಗಳ ಮೂಲಭೂತ ಸೌಲಭ್ಯಗಳ ಒದಗಿಸುವಿಕೆ ಮತ್ತು ಉದ್ಯೋಗ ಮೇಳಗಳನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಸೂಕ್ತ ಕ್ರಮ ವಹಿಸಲಾಗುತ್ತಿದ್ದು, ಪ್ರಸ್ತುತ ರಾಜ್ಯದಲ್ಲಿ ಮೈಸೂರು, ಹಾಸನ, ಹುಬ್ಬಳ್ಳಿ-ಧಾರವಾಡ, ಕಲಬುರಗಿ, ತುಮಕೂರು, ಕೋಲಾರ, ದಾವಣಗೆರೆ, ಬಳ್ಳಾರಿ ಹಾಗೂ ಮಂಗಳೂರು ಈ 9 ಕಛೇರಿಗಳಲ್ಲಿ ಮಾದರಿ ವೃತ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>**<u>ಉದ್ಯೋಗ ಮೇಳ</u>**:- ಸ್ಥಳೀಯವಾಗಿ ಲಭ್ಯವಿರುವ ಕೈಗಾರಿಕೆಗಳಿಂದ ಲಭ್ಯವಿರುವ ಖಾಲಿ ಹುದ್ದೆಗಳ ಮಾಹಿತಿ ಪಡೆದು, ಜಿಲ್ಲಾ ಮಟ್ಟದಲ್ಲಿ ಮಿನಿ ಉದ್ಯೋಗ **ಮೇಳಗಳನ್ನು** ಏರ್ಪಡಿಸುವ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಒದಗಿಸಿಕೊಡಲು ಸಹಕರಿಸಲಾಗುತ್ತಿದೆ. |

| | |
|---|---|
| | **ಕರ್ನಾಟಕ ಕೌಶಲ್ಯಾಭಿವೃದ್ದಿ ನಿಗಮ:**<br>ಕರ್ನಾಟಕ ರಾಜ್ಯದಾದ್ಯಂತ ಗ್ರಾಮಾಂತರ ಮತ್ತು ತಾಲ್ಲೂಕು ಪ್ರದೇಶಗಳನ್ನು ಒಳಗೊಂಡಂತೆ ವಿವಿಧ ಸರ್ಕಾರಿ / ಖಾಸಗಿ ತರಬೇತಿ ಸಂಸ್ಥೆಗಳ ಮುಖಾಂತರ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಮತ್ತು ಪ್ರಧಾನಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯಡಿ ಜಾರಿಗೊಳಿಸಲಾಗಿರುತ್ತದೆ. ಅದಾಗ್ಯೂ<br><br>• **ಕಿರು ಉದ್ಯಮಶೀಲತೆ ಕಾರ್ಯಕ್ರಮ (NEP)** : ಹೆಸರೇ ಸೂಚಿಸುವಂತೆ ತಳಮಟ್ಟದ ಕಿರು ಉದ್ಯಮಿಗಳಿಗೆ ಕೌಶಲ್ಯಗಳನ್ನು ಕಲಿಯಲು ಮತ್ತು ವ್ಯವಹಾರ ಜ್ಞಾನವನ್ನು ಪಡೆಯಲು ಸಹಾಯ ಮಾಡುವ ಉದ್ಯಮಶೀಲತೆಯ ಕಾರ್ಯಕ್ರಮವಾಗಿದ್ದು, 200 ತಳ ಮಟ್ಟದ ಕಿರು ಉದ್ಯಮಿಗಳನ್ನು ಪ್ರೋತ್ಸಾಹಿಸುವ ಹಾಗೂ ಮಹಿಳೆಯರಿಗೆ ವಿಶೇಷ ಗಮನವನ್ನು ನೀಡುವ ಮೂಲಕ ತರಬೇತಿ ಮತ್ತು ಸೌಲಭ್ಯವನ್ನು ಒದಗಿಸುವ ಮೂಲಕ ಉದ್ಯಮಶೀಲತೆಯ ಪ್ರತಿಯೊಂದು ಹಂತದಲ್ಲೂ ಇರುವ ಹಲವಾರು ಸವಾಲುಗಳನ್ನು ಎದುರಿಸಲು ಸಹಾಯ ಮಾಡುವುದಾಗಿದೆ.<br>• 2022-23 ನೇ ಸಾಲಿನಲ್ಲಿ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ Skill on Wheels ಯೋಜನೆಯನ್ನು ಪೈಲಟ್ ಆಧಾರದ ಮೇರೆಗೆ ಪ್ರಾರಂಭಿಸಲಾಗುತ್ತಿದ್ದು, ದೂರದ ಹಳ್ಳಿಗಾಡಿನ ಹಾಗೂ ಗುಡ್ಡಗಾಡು ಪ್ರದೇಶದಲ್ಲಿ ವಾಸಿಸುವ ಯುವ ಜನತೆಗೆ ಹಾಗೂ ಇತರೆ ಪ್ರದೇಶಗಳಲ್ಲಿನ ಯುವ ಜನತೆಗೆ ಕೌಶಲ್ಯಾಧಾರಿತ ತರಬೇತಿಯಲ್ಲಿ ಸ್ಥಳದಲ್ಲಿಯೇ ನೀಡುವ ಮಹಾತ್ವಾಂಕ್ಷೆಯನ್ನು ಹೊಂದಿರುತ್ತದೆ.<br>• ಸಾಂಪ್ರದಾಯಿಕ ಕರಕುಶಲ ಕಲೆಯನ್ನು ಸಂರಕ್ಷಿಸುವ ಸಲುವಾಗಿ ಚನ್ನಪಟ್ಟಣದ ಕರಕುಶಲ ತರಬೇತಿ ಕೇಂದ್ರವನ್ನು ಪ್ರಾರಂಭಿಸಲಾಗಿದ್ದು, ತರಬೇತಿ ಈಗಾಗಲೇ ಪ್ರಾರಂಭಿಸಲಾಗಿದೆ.<br><br>**<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ</u> (<u>NRLM</u>):**<br>ನಿರುದ್ಯೋಗಿ ಪದವೀಧರರಿಗೆ ಯಾವುದೇ ಪ್ರತ್ಯೇಕ ಸೌಲಭ್ಯಗಳು ಲಭ್ಯವಿರುವುದಿಲ್ಲ. ಆದರೆ, ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ಅನುಷ್ಠಾನಗೊಳಿಸುತ್ತಿರುವ ಈ ಕೆಳಗಿನ ಕಾರ್ಯಕ್ರಮಗಳಡಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಪದವೀಧರರು ಸಹ ಅರ್ಜಿಗಳನ್ನು ಸಲ್ಲಿಸುವ ಮೂಲಕ ನಿಯಮಾನುಸಾರ ಸೌಲಭ್ಯ ಪಡೆಯಬಹುದಾಗಿದೆ.<br><br>1. **ದೀನ ದಯಾಳ ಉಪಾದ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯ- ಡಿಡಿಯುಜಿಕೆವೈ:**<br>ಈ ಯೋಜನೆಯಡಿ ಬಡತನ ರೇಖೆಗಿಂತ ಕಡಿಮೆ ಇರುವ ಕುಟುಂಬದ |

| | |
|---|---|
| | 35 ವಯೋಮಾನದವರೆಗಿನ ಗ್ರಾಮೀಣ ಯುವಕ ಯುವತಿಯರಿಗೆ ಅವರುಗಳ ವಿದ್ಯಾರ್ಹತೆಗನುಗುಣವಾಗಿ ಕಂಪ್ಯೂಟರ್, ಹಾಸ್ಪಿಟಾಲಿಟಿ, ಡಾಟಾಎಂಟ್ರಿ, ಪ್ರವಾಸೋದ್ಯಮ, ಮೆಕಾನಿಕ್, ನರ್ಸಿಂಗ್, ಸೆಕ್ಯೂರಿಟಿ ಸರ್ವಿಸಸ್, ಟೈಲರಿಂಗ್ ಸೇರಿದಂತೆ ವಿವಿಧ 279 ಟ್ರೇಡ್‌ಗಳಲ್ಲಿ ಕನಿಷ್ಠ 3 ತಿಂಗಳುಗಳಿಂದ ಒಂದು ವರ್ಷದವರೆಗೆ ಉಚಿತ ವಸತಿಯೊಂದಿಗಿನ ಶ್ರೇಷ್ಠ ಗುಣಮಟ್ಟದ ಕೌಶಲ್ಯ ತರಬೇತಿ ನೀಡಿ ಕಡ್ಡಾಯವಾಗಿ ಉದ್ಯೋಗ ಒದಗಿಸುವ ಏಕೈಕ ಯೋಜನೆಯಾಗಿದೆ.<br><br>2. **ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ:** ಸದರಿ ತರಬೇತಿ ಸಂಸ್ಥೆಯ ಮೂಲಕ 45 ವಯೋಮಾನದವರೆಗಿನ ಗ್ರಾಮೀಣ ನಿರುದ್ಯೋಗ ಯುವಕ/ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ತರಬೇತಿಯನ್ನು ನೀಡಲಾಗುತ್ತಿದೆ, ಸದರಿ ಕಾರ್ಯಕ್ರಮದಲ್ಲಿ 61 ಕೋರ್ಸ್‌ಗಳಡಿ ತರಬೇತಿ ಒದಗಿಸಿ, ಸ್ವ-ಉದ್ಯೋಗ ಕೈಗೊಳ್ಳಲು ಬೇಕಾಗಿರುವ ಅಗತ್ಯ ಮಾಹಿತಿ, ಯೋಜನಾ ವರದಿ, ಮಾರುಕಟ್ಟೆ ಆಯ್ಕೆಗೆ ಸಂಬಂಧಿಸಿದಂತೆ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ. ತರಬೇತಿ ಸಂದರ್ಭದಲ್ಲಿ ಶಿಭಿರಾರ್ಥಿಗಳಿಗೆ ಸಮವಸ್ತ್ರ ಮತ್ತು ತರಬೇತಿ ಭತ್ಯೆ ನೀಡಲಾಗುತ್ತಿದೆ.<br><br>**ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್)**<br>ಸಿಡಾಕ್ ಸಂಸ್ಥೆಯಿಂದ ಆಸಕ್ತ ಯುವಕ/ಯುವತಿಯರಿಗೆ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಂಡು ಅವರುಗಳು ಸ್ವಂತ ಉದ್ಯಮಿಗಳಾಗುವಲ್ಲಿ ತರಬೇತಿ, ಮಾರ್ಗದರ್ಶನ ಹಾಗೂ ಬೆಂಬಲ ಸೇವೆಯನ್ನು ನೀಡಲಾಗುತ್ತಿದೆ. |
| (ಆ)ಪಟ್ಟಣಕ್ಕೆ ಬರುವುದನ್ನು ತಡೆಯಲು ಯಾವ ಪರ್ಯಾಯ ವ್ಯವಸ್ಥೆಗಳ ಬಗ್ಗೆ ಸರ್ಕಾರ ಗಂಭೀರವಾದ ಚಿಂತನೆ ನಡೆಸಿದೆ; | **ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ:**<br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಕೃಷಿ ಇಲಾಖೆಯ ಕೃಷಿ ವಿಜ್ಞಾನ ಕೇಂದ್ರಗಳನ್ನು ತರಬೇತಿ ಪಾಲುದಾರರನ್ನಾಗಿ ಮಾಡಿಕೊಂಡು ಕೃಷಿ ತರಬೇತಿಯು ಸೇರಿದಂತೆ ಸ್ವಯಂ ಉದ್ಯೋಗಗಳಲ್ಲಿ ತರಬೇತಿ (organic seed grower, Form Equipments Mechanic, Artificial Insemination Technician) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>**<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ</u> (NRLM):**<br>ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ಅನುಷ್ಠಾನಗೊಳಿಸುತ್ತಿರುವ ಈ ಕೆಳಗಿನ ಕಾರ್ಯಕ್ರಮಗಳಡಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಪದವೀಧರರು ಸಹ ಅರ್ಜಿಗಳನ್ನು ಸಲ್ಲಿಸುವ ಮೂಲಕ ನಿಯಮಾನುಸಾರ ಸೌಲಭ್ಯ ಪಡೆಯಬಹುದಾಗಿದೆ.<br><br>1. **ದೀನ ದಯಾಳ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯ-ಡಿಡಿಯುಜಿಕೆವೈ:**<br>ಈ ಯೋಜನೆಯಡಿ ಬಡತನ ರೇಖೆಗಿಂತ ಕಡಿಮೆ ಇರುವ ಕುಟುಂಬದ |

| | |
|---|---|
| | 35 ವಯೋಮಾನದವರೆಗಿನ ಗ್ರಾಮೀಣ ಯುವಕ ಯುವತಿಯರಿಗೆ ಅವರುಗಳ ವಿದ್ಯಾರ್ಹತೆಗನುಗುಣವಾಗಿ ಕಂಪ್ಯೂಟರ್, ಹಾಸ್ಪಿಟಾಲಿಟಿ, ಡಾಟಾಎಂಟ್ರಿ, ಪ್ರವಾಸೋದ್ಯಮ, ಮೆಕಾನಿಕ್, ನರ್ಸಿಂಗ್, ಸೆಕ್ಯೂರಿಟಿ ಸರ್ವಿಸಸ್, ಟೈಲರಿಂಗ್ ಸೇರಿದಂತೆ ವಿವಿಧ 279 ಟ್ರೇಡ್‌ಗಳಲ್ಲಿ ಕನಿಷ್ಠ 3 ತಿಂಗಳುಗಳಿಂದ ಒಂದು ವರ್ಷದವರೆಗೆ ಉಚಿತ ವಸತಿಯೊಂದಿಗಿನ ಶ್ರೇಷ್ಠ ಗುಣಮಟ್ಟದ ಕೌಶಲ್ಯ ತರಬೇತಿ ನೀಡಿ ಕಡ್ಡಾಯವಾಗಿ ಉದ್ಯೋಗ ಒದಗಿಸುವ ಏಕೈಕ ಯೋಜನೆಯಾಗಿದೆ.<br><br>2. **ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ:** ಸದರಿ ತರಬೇತಿ ಸಂಸ್ಥೆಯ ಮೂಲಕ 45 ವಯೋಮಾನದವರೆಗಿನ ಗ್ರಾಮೀಣ ನಿರುದ್ಯೋಗ ಯುವಕ/ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ತರಬೇತಿಯನ್ನು ನೀಡಲಾಗುತ್ತಿದೆ, ಸದರಿ ಕಾರ್ಯಕ್ರಮದಲ್ಲಿ 61 ಕೋರ್ಸ್‌ಗಳಡಿ ತರಬೇತಿ ಒದಗಿಸಿ, ಸ್ವ-ಉದ್ಯೋಗ ಕೈಗೊಳ್ಳಲು ಬೇಕಾಗಿರುವ ಅಗತ್ಯ ಮಾಹಿತಿ, ಯೋಜನಾ ವರದಿ, ಮಾರುಕಟ್ಟೆ ಆಯ್ಕೆಗೆ ಸಂಬಂಧಿಸಿದಂತೆ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ. ತರಬೇತಿ ಸಂದರ್ಭದಲ್ಲಿ ಶಿಭಿರಾರ್ಥಿಗಳಿಗೆ ಸಮವಸ್ತ್ರ ಮತ್ತು ತರಬೇತಿ ಭತ್ಯೆ ನೀಡಲಾಗುತ್ತಿದೆ.<br>೩. ಗ್ರಾಮಗಳಲ್ಲಿನ ಪದವೀಧರ ಮಹಿಳೆಯರಿಗೆ ಕೋಳಿ ಸಾಕಾಣಿಕೆ, ಹೈನುಗಾರಿಕೆ, ಎರೆಹುಳ ಗೊಬ್ಬರ ತಯಾರಿಕೆಗೆ ಇತರೆ ಸಹ ಇಲಾಖೆಗಳೊಂದಿಗೆ ಒಗ್ಗೂಡಿಸುವಿಕೆ ಯೋಜನೆಯಡಿ ಕ್ರಮ ಜರುಗಿಸಲಾಗುತ್ತಿದೆ. ಪದವೀಧರರು ಸ್ವ-ಸಹಾಯ ಗುಂಪಿನ ಸದಸ್ಯರಾಗಿ ನಿಯಮಾನುಸಾರ ಸಮುದಾಯ ಬಂಡವಾಳ ನಿಧಿಯ ಪ್ರಯೋಜನೆಯನ್ನು ಪಡೆಯುವ ಮೂಲಕ ಇವುಗಳು ಸೇರಿದಂತೆ ಇತರೆ ಜೀವನೋಪಾಯ ಚಟುವಟಿಕೆಗಳಿಗೆ ಮೂಲ ಸೌಕರ್ಯವನ್ನು ಕಲ್ಪಿಸಿಕೊಳ್ಳುವ ಅವಕಾಶವಿದೆ. |
| (ಇ)ಪ್ರತಿ ಹಳ್ಳಿಗಳ / ಗ್ರಾಮಗಳಲ್ಲಿ ಇರುವ ಪದವೀಧರರಿಗೆ ಕೋಳಿ ಸಾಕಾಣಿಕೆ, ಹೈನುಗಾರಿಕೆ, ಎರೆಹುಳ ಗೊಬ್ಬರ ತಯಾರಿಕೆ, ಆಯಾ ಪ್ರದೇಶದ ಅಗತ್ಯತೆಗೆ ತಕ್ಕ ಉದ್ಯೋಗ ಕಲ್ಪಿಸಿ ಅವರುಗಳ ಮನೆ ಬಾಗಿಲಿಗೆ ಧಾವಿಸಿ ಅವರಿಗೆ ಅವಶ್ಯವಿರುವ ಸಾಲದಿಂದ ಹಿಡಿದು ಎಲ್ಲ ಮೂಲಸೌಕರ್ಯವನ್ನು ಸರ್ಕಾರವೇ ಒದಗಿಸಿ ಉದ್ಯೋಗ ಕ್ರಾಂತಿ ಯೋಜನೆ ನಿರ್ಮಿಸಲು ಸರ್ಕಾರಕ್ಕಿರುವ ತೊಂದರೆಗಳೇನು; | **ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ:**<br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಕೃಷಿ ಇಲಾಖೆಯ ಕೃಷಿ ವಿಜ್ಞಾನ ಕೇಂದ್ರಗಳನ್ನು ತರಬೇತಿ ಪಾಲುದಾರರನ್ನಾಗಿ ಮಾಡಿಕೊಂಡು ಕೃಷಿ ತರಬೇತಿಯು ಸೇರಿದಂತೆ ಸ್ವಯಂ ಉದ್ಯೋಗಗಳಲ್ಲಿ ತರಬೇತಿ (organic seed grower, Form Equipments Mechanic, Artificial Insemination Technician) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಯಾವುದೇ ಸಾಲ ಸೌಲಭ್ಯ ಒದಗಿಸುವ ಯೋಜನೆಯು ಜಾರಿಯಲ್ಲಿರುವುದಿಲ್ಲ.<br>**<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ</u> (NRLM):**<br>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ಗ್ರಾಮಗಳಲ್ಲಿನ ಪದವೀಧರ ಮಹಿಳೆಯರಿಗೆ ಕೋಳಿ ಸಾಕಾಣಿಕೆ, ಹೈನುಗಾರಿಕೆ, ಎರೆಹುಳ ಗೊಬ್ಬರ ತಯಾರಿಕೆಗೆ ಇತರೆ ಸಹ ಇಲಾಖೆಗಳೊಂದಿಗೆ ಒಗ್ಗೂಡಿಸುವಿಕೆ ಯೋಜನೆಯಡಿ ಕ್ರಮ ಜರುಗಿಸಲಾಗುತ್ತಿದೆ. ಪದವೀಧರರು ಸ್ವ-ಸಹಾಯ |

| | |
|---|---|
| | ಗುಂಪಿನ ಸದಸ್ಯರಾಗಿ ನಿಯಮಾನುಸಾರ ಸಮುದಾಯ ಬಂಡವಾಳ ನಿಧಿಯ ಪ್ರಯೋಜನೆಯನ್ನು ಪಡೆಯುವ ಮೂಲಕ, ಇವುಗಳು ಸೇರಿದಂತೆ ಇತರೆ ಜೀವನೋಪಾಯ ಚಟುವಟಿಕೆಗಳಿಗೆ ಮೂಲ ಸೌಕರ್ಯವನ್ನು ನಿಯಮಾನುಸಾರ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.<br><br>**ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್)**<br>ಸಿಡಾಕ್ ಸಂಸ್ಥೆಯಿಂದ ಗ್ರಾಮೀಣ ಹಾಗೂ ನಗರ ಪ್ರದೇಶದ ಆಸಕ್ತ ಯುವಕ/ಯುವತಿಯರಿಗೆ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಹಾಗೂ ಬ್ಯಾಂಕುಗಳಿಂದ ದೊರೆಯುವ ಸಾಲ, ಇತರೇ ಇಲಾಖೆಗಳಿಂದ ದೊರೆಯುವ ಸೌಲಭ್ಯಗಳನ್ನು ಪಡೆಯುವ ಕುರಿತಾಗಿ ಸೂಕ್ತ ಮಾರ್ಗದರ್ಶನ ಹಾಗೂ ಬೆಂಬಲ ಸೇವೆಯನ್ನು ನೀಡಲಾಗುತ್ತಿದೆ. |
| (ಈ) ಮೂಲಸೌಕರ್ಯ ಇರುವ 50 ರಿಂದ 1000 ಮನೆ ಇರುವ ಹಳ್ಳಿ/ಗ್ರಾಮಗಳಲ್ಲಿ ಸರ್ಕಾರವೇ ಕೈಗಾರಿಕೆಗಳನ್ನು ಸ್ಥಾಪಿಸುವುದು, ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಎರೆಹುಳ ಗೊಬ್ಬರ ತಯಾರಿಕಾ ಘಟಕ ಇವುಗಳನ್ನು ಪ್ರೋತ್ಸಾಹಿಸಿ 50% ಕ್ಕೂ ಹೆಚ್ಚು ಧನ ಸಹಾಯ ನೀಡುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | **<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ</u> (NRLM):**<br>ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿಯ ಸ್ವ ಸಹಾಯ ಗುಂಪುಗಳ ಫಲಾನುಭವಿಗಳಿಗೆ ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಎರೆಹುಳ ಗೊಬ್ಬರ ತಯಾರಿಕಾ ಘಟಕಗಳ ಪ್ರಯೋಜನವನ್ನು ಒದಗಿಸಲು ಮಹಾತ್ಮಾ ಗಾಂಧಿ ನರೇಗಾ ಯೋಜನೆ ಹಾಗೂ ಇತರೆ ಸಹ ಇಲಾಖೆಗಳ ಸಹಯೋಗದ ಮೂಲಕ ಒಗ್ಗೂಡಿಸುವಿಕೆಯಡಿ ನಿರಂತರ ಕ್ರಮ ಜರುಗಿಸಲಾಗುತ್ತಿದೆ. ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಎರೆಹುಳ ಗೊಬ್ಬರ ತಯಾರಿಕಾ ಘಟಕ ಮತ್ತು ಇತರೆ ಜೀವನೋಪಾಯ ಚಟುವಟಿಕೆ ಕೈಗೊಳ್ಳಲು ಮನೆ ಬಾಗಿಲಿಗೆ ಸೌಲಭ್ಯ ಕಲ್ಪಿಸಲಾಗುತ್ತಿದೆ.<br>ರಾಜ್ಯದ ನಾಲ್ಕು ತಾಲ್ಲೂಕುಗಳಾದ ಕೊಪ್ಪಳ, ನಂಜನಗೂಡು, ರಾಮನಗರ ಮತ್ತು ದೇವನಹಳ್ಳಿಗಳಲ್ಲಿ 2021-22 ನೇ ಸಾಲಿನಿಂದ ಆರಂಭಿಕ ಗ್ರಾಮೀಣ ಉದ್ಯಮಶೀಲತೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಮುಂದಿನ 4 ವರ್ಷಗಳಲ್ಲಿ 6000ಕ್ಕೂ ಹೆಚ್ಚು ಮಹಿಳಾ ಉದ್ದಿಮೆ / ಕೈಗಾರಿಕೆಗಳನ್ನು ಸ್ಥಾಪಿಸುವ ನಿರೀಕ್ಷೆ ಹೊಂದಲಾಗಿದೆ. |

**ಸಂಖ್ಯೆ: ಕೌಉಜೀಇ 13 ಕೌಗುಪ್ರ 2022**

**(ಡಾ॥ ಅಶ್ವಥ್‌ನಾರಾಯಣ .ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು